**ಕರ್ನಾಟಕ ಸರ್ಕಾರ**

**1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ.10/2021**

ಪಿ.ಡಬ್ಲ್ಯೂ: 5

ಸಿ.ಡಬ್ಲ್ಯೂ: 4

ಸಾಕ್ಷಿದಾರರ ಹೆಸರು : ನಾರಾಯಣಸ್ವಾಮಿ
ತಂದೆ ಹೆಸರು: :ಗೋವಿಂದರೆಡ್ಡಿ
ವಯಸ್ಸು : **43 ವರ್ಷ**
ಉದ್ಯೋಗ : ವ್ಯವಸಾಯ
ವಾಸಸ್ಥಳ : ಸಿದ್ದರಹಳ್ಳಿ

**ದಿನಾಂಕ: 09-02-2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಆರೋಪಿ ನನ್ನ ಅಣ್ಣ. ಈಗ್ಗೆ ಸುಮಾರು ಐದು ವರ್ಷಗಳ ಹಿಂದೆ ಸಿದ್ದರಹಳ್ಳಿ ಗ್ರಾಮದಲ್ಲಿ ಸರ್ವೆ ನಂ.39 ರಲ್ಲಿ ನಾವು ಆಲೂಗೆಡ್ಡೆ ಹಾಕುತ್ತಿದ್ದಾಗ ಆರೋಪಿಯು ಏಕಾಏಕಿ ನಮ್ಮ ಜಮೀನಿಗೆ ಅತೀಕ್ರಮ ಪ್ರವೇಶ ಮಾಡಿ ಆಲೂಗೆಡ್ಡೆ ಹಾಕಬೇಡಿ ಎಂದು ಜಗಳ ಮಾಡಿ ಕೆಲಸ ನಿಲ್ಲಿಸಿರುತ್ತಾರೆ. ಆರೋಪಿಯ ಮೇಲೆ ನಾನು ಮರುದಿನ ಲಿಂಗದಹಳ್ಳಿ ಪೊಲೀಸ್ ಠಾಣೆಯಲ್ಲಿ ದೂರನ್ನು ನೀಡಿರುತ್ತೇನೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **29-06-2020** ರಂದು ಬೆಳಿಗ್ಗೆ **11-00** ಗಂಟೆ ಸಮಯದಲ್ಲಿ ಹುಲಿತಿಮ್ಮಾಪುರ ಗ್ರಾಮದ ಸರ್ವೆ ನಂ.**39** ರಲ್ಲಿ ನಿಮ್ಮ ಜಮೀನಿಗೆ ಆಲೂಗೆಡ್ಡೆ ಹಾಕುತ್ತಿರುವಾಗ ಆಗ ಟ್ರಾಕ್ಟರ್ ನಲ್ಲಿ ಉಳುಮೆ ಮಾಡುತ್ತಿದ್ದಾಗ ಆರೋಪಿ ಅತೀಕ್ರಮ ಪ್ರವೇಶ ಮಾಡಿ ನನಗೂ ಹಾಗೂ ಚಾಸಾ-1 ರವರಿಗೆ ಆಲೂಗೆಡ್ಡೆ ಹಾಕಬೇಡಿ ಎಂದು ಅವಾಚ್ಯ ಶಬ್ದಗಳಿಂದ ಬೈದಿರುತ್ತಾರೆಂದರೆ ಸರಿ. ಚಾಸಾ-1 ರವರಿಗೆ ಆರೋಪಿ ಕಲ್ಲಿನಿಂದ ಹೊಡೆದು ಹಲ್ಲೆ ಮಾಡಿರುತ್ತಾರೆಂದರೆ ಸರಿ. ಅವರನ್ನು ಹಿಡಿದು ಎಳೆದಾಡಿ ಅವಮಾನ ಮಾಡಿರುತ್ತಾರೆಂದರೆ ಸರಿ. ಗಲಾಟೆಯನ್ನು ನಾನು ಹಾಗೂ ಕೂಲಿ ಕೆಲಸಕ್ಕೆ ಬಂದಮ ಜಗಳ ಬಿಡಿಸಿರುತ್ತೇವೆ ಎಂದರೆ ಸರಿ. ಆರೋಪಿ ನನಗೆ ಪ್ರಾಣ ಬೆದರಿಕೆ ಹಾಕಿರುತ್ತಾರೆಂದರೆ ಸರಿ. ನಾನು ನನ್ನ ಹೆಂಡತಿಗೆ ಆಸ್ಪತ್ರೆಗೆ ಕರೆದುಕೊಂಡು ಹೋಗಿ ಚಿಕಿತ್ಸೆ ಕೊಡಿಸಿರುತ್ತೇನೆಂದರೆ ಸರಿ.

**ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.**

ನನಗೂ ಹಾಗೂ ನನ್ನ ಅಣ್ಣನಾದ ಆರೋಪಿಯ ವಿರುದ್ಧ ಇದೇ ನ್ಯಾಯಾಲಯದಲ್ಲಿ ಸಿವಿಲ್ ವ್ಯಾಜ್ಯ ಬಾಕಿ ಇದೆ ಎಂದರೆ ಸರಿ ಹಾಗೂ ಮಾನ್ಯಉಚ್ಚ ನ್ಯಾಯಾಲಯದಲ್ಲೂ ಸಹ ಸಿವಿಲ್ ವ್ಯಾಜ್ಯ ಬಾಕಿ ಇದೆ ಎಂದರೆ ಸರಿ. ಖಾತೆಯನ್ನು ಆರೋಪಿಯ ಹೆಸರು ಹೊರತುಪಡಿಸಿ ನೀವು ಮಾತ್ರ ಮಾಡಿಕೊಂಡಿರುತ್ತಿರಾ ಎಂದರೆ ಸಾಕ್ಷಿ ನನ್ನ ತಂದೆ ಮಾಡಿರುತ್ತಾರೆಂದು ನುಡಿದಿರುತ್ತಾರೆ. ಘಟನೆಯಾದ ದಿನಾಂಕ ನನಗೆ ನೆನಪಿಲ್ಲ. ಆರೋಪಿಯು ಯವುದೇ ಗಲಟೆ ಮಾಡಿರುವುದಿಲ್ಲ, ಚಾಸಾ-1 ರವರಿಗೆ ಯಾವುದೇ ಹಲ್ಲೆ ಮಾಡಿರುವುದಿಲ್ಲ, ಹಾಗೂ ಯಾವುದೇ ಅವಾಚ್ಯ ಶಬ್ಧಗಳಿಂದ ಬೈದಿರುವುದಿಲ್ಲ ಎಂದರೆ ಸರಿಯಲ್ಲ. ಆರೋಪಿ ನಿಮಗೆ ಕೊಲೆ ಬೆದರಿಕೆ ಹಾಕಿರುವುದಿಲ್ಲ ಎಂದರೆ ಸರಿಯಲ್ಲ. ನನಗೂ ಹಾಗೂ ನನ್ನಅಣ್ಣನಿಗೂ ಆಸ್ತಿ ವಿಚಾರವಾಗಿ ಮನಸ್ತಾಪ ಇದೆ ಎಂದರೆ ಸರಿ. ನೀವು ನಿಮ್ಮ ಅಣ್ಣನ ಮೇಲೆ ಸುಳ್ಳು ದೂರನ್ನು ನೀಡಿ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದಿರಾ ಎಂದರೆ ಸರಿಯಲ್ಲ.

**ಮರುವಿಚಾರಣೆ:** ಇರುವುದಿಲ್ಲ.

(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)

ಓ. ಕೇ. ಸ. ಇ. ಎ. ಒ.

ಸಹಿ/-

1ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**